# ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 985

02. ಸದಸ್ಯರ ಹೆಸರು : ಶ್ರೀ ಮಧು ಜಿ ಮಾದೇಗೌಡ
(ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)

03. ಉತ್ತರಿಸುವ ದಿನಾಂಕ : 14.12.2023

04. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪೊಲೀಸ್ ಇಲಾಖೆಯಲ್ಲಿ ಹಲವು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿರುವ ಗ್ರೂಪ್ 'ಸಿ' ಮತ್ತು 'ಡಿ' ವರ್ಗದ ಅರ್ಹ ನೌಕರರಿಗೆ ಅಂತರ ಜಿಲ್ಲಾ ವರ್ಗಾವಣೆಯಾಗದೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪೊಲೀಸ್ ಇಲಾಖೆಯ ನೌಕರರು ಸೇರಿದಂತೆ ಸರ್ಕಾರಿ ನೌಕರರ ಅಂತರ್ ಜಿಲ್ಲಾ ವರ್ಗಾವಣೆಗೆ ಅವಕಾಶ ಕಲ್ಪಿಸಲಾಗಿರುವುದನ್ನು ಕೆಸಿಎಸ್ (ಸಾಮಾನ್ಯ ನೇಮಕಾತಿ) ನಿಯಮಗಳು 1977 ನಿಯಮ 16ಎ ಉಪಖಂಡ(ii) ಅನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 179 ಸೇನೆನಿ 2020 ದಿನಾಂಕ:06.07.2021ರಲ್ಲಿ ತಿದ್ದುಪಡಿ ಮಾಡಿ ನಿರ್ಬಂಧಿಸಿರುತ್ತದೆ. |
| ಆ) | ಬಂದಿದ್ದಲ್ಲಿ, ಗ್ರೂಪ್ 'ಸಿ' ಮತ್ತು 'ಡಿ' ವರ್ಗದ ನೌಕರರ ಕೋರಿಕೆ ಮೇರೆಗೆ ಅಂತರ್ ಜಿಲ್ಲೆಗೆ ವರ್ಗಾವಣೆ ಮಾಡುವ ಪ್ರಕ್ರಿಯೆಯನ್ನು ಸರ್ಕಾರ ಯಾವಾಗಿನಿಂದ ಆರಂಭಿಸಲಾಗುವುದು; (ಸಂಪೂರ್ಣ ವಿವರ ನೀಡುವುದು) | ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಅಧಿಕಾರಿ / ಸಿಬ್ಬಂದಿಗಳಿಗೆ ಅಂತರ್ ವಲಯ ಹಾಗೂ ಜಿಲ್ಲೆಯಿಂದ ಜಿಲ್ಲೆಗೆ ವರ್ಗಾವಣೆಗೆ ಅವಕಾಶ ಕಲ್ಪಿಸುವ ಸಲುವಾಗಿ ಪ್ರತ್ಯೇಕವಾಗಿ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ (ವರ್ಗಾವಣೆ) (ವಿಶೇಷ) ನಿಯಮಗಳು 2022ಅನ್ನು ರೂಪಿಸಿ ದಿನಾಂಕ:22.02.2023ರಿಂದ ಜಾರಿಗೆ ತರಲಾಗಿರುತ್ತದೆ (ಸರ್ಕಾರದ ಅಧಿಸೂಚನೆ ಸಂಖ್ಯೆ; ಹೆಚ್‌ಡಿ 93 ಪಿಪಿಎಸ್ 2022 ದಿನಾಂಕ:22.02.2023).<br>ಪೊಲೀಸ್ ಇಲಾಖೆಯ ವಿಶೇಷ ವರ್ಗಾವಣಾ ನಿಯಮಗಳ ಅನುಸಾರ ಅರ್ಹರಿರುವ ಅಧಿಕಾರಿ / ಸಿಬ್ಬಂದಿಗಳು ಒಂದು ಘಟಕದಿಂದ ಇನ್ನೊಂದು ಘಟಕಕ್ಕೆ ವರ್ಗಾವಣೆ ಬಯಸಿದ್ದಲ್ಲಿ ಇಲಾಖೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ರೂಪಿಸಲಾಗಿರುವ ವರ್ಗಾವಣೆ ಪೋರ್ಟಲ್‌ನಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ದಿನಾಂಕ:01.03.2023ರಿಂದ ಅವಕಾಶ ಕಲ್ಪಿಸಲಾಗಿರುತ್ತದೆ. |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಪೊಲೀಸ್ ಇಲಾಖೆಗೆ ಈವರೆವಿಗೂ ಅಂತರ್ ಜಿಲ್ಲಾ ವರ್ಗಾವಣೆ ಕೋರಿ ಎಷ್ಟು ಮಂದಿ ನೌಕರರು ಮನವಿ ಸಲ್ಲಿಸಿದ್ದಾರೆ; ಈ ಪೈಕಿ ಎಷ್ಟು ಮಂದಿಯನ್ನು ವರ್ಗಾವಣೆ ಮಾಡಲಾಗಿದೆ ಅಥವಾ ವರ್ಗಾವಣೆ ಮಾಡಲು ಬಾಕಿ ಇದೆ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು) | ಪೊಲೀಸ್ ಇಲಾಖೆಯ ನೂತನ ವಿಶೇಷ ವರ್ಗಾವಣಾ ನಿಯಮ ಜಾರಿಗೆ ಬಂದ ನಂತರ ಇಲಾಖೆಯ ಗ್ರೂಪ್ 'ಸಿ' ಮತ್ತು 'ಡಿ' ವೃಂದದ ಒಟ್ಟು 4920 ಅಧಿಕಾರಿ / ಸಿಬ್ಬಂದಿಗಳು ವರ್ಗಾವಣೆ ಕೋರಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಿದ್ದು, ಈ ಅರ್ಜಿಗಳನ್ನು ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ (ವರ್ಗಾವಣೆ) (ವಿಶೇಷ) ನಿಯಮಗಳು 2022 ಹಾಗೂ ಕೆಸಿಎಸ್ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಅನುಸಾರ ಪರಿಶೀಲಿಸಲಾಗುತ್ತಿದೆ (ಜಿಲ್ಲಾವಾರು ವಿವರವನ್ನು ಅನುಬಂಧ-ಎ ರಲ್ಲಿ ಸಲ್ಲಿಸಿದೆ).<br>ಇಲಾಖೆಯ ವರ್ಗಾವಣೆ ಪೋರ್ಟಲ್‌ನಲ್ಲಿ ಸ್ವೀಕೃತವಾಗಿರುವ ಅರ್ಜಿಗಳನ್ನು ಆಡಳಿತ ನಿರ್ವಹಣೆ ಹಾಗೂ ರಾಜ್ಯದ ಕಾನೂನು ಮತ್ತು ಸುವ್ಯವಸ್ಥೆಗೆ ಯಾವುದೇ ಧಕ್ಕೆಯಾಗದ ರೀತಿಯಲ್ಲಿ ಪರಿಗಣಿಸಬೇಕಾಗಿದ್ದು ಪರಿಶೀಲನೆಯಲ್ಲಿವೆ. |
| ಈ) | ಪೊಲೀಸ್ ಇಲಾಖೆಯಲ್ಲಿ ನೌಕರರನ್ನು ಅಂತರ್ ಜಿಲ್ಲೆಗೆ ವರ್ಗಾವಣೆ ಮಾಡಲು ಅನುಸರಿಸಲಾಗುವ ಮಾನದಂಡಗಳೇನು? (ವಿವರದೊಂದಿಗೆ ಸರ್ಕಾರದ ಆದೇಶ ಪ್ರತಿ ನೀಡುವುದು) | ಪೊಲೀಸ್ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳನ್ನು ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ (ವರ್ಗಾವಣೆ) (ವಿಶೇಷ) ನಿಯಮಗಳು 2022 ಹಾಗೂ ಕೆಸಿಎಸ್ (ಸಾಮಾನ್ಯ ನೇಮಕಾತಿ) ನಿಯಮಗಳು 1977 ಮತ್ತು ವರ್ಗಾವಣೆ ಸಂಬಂಧ ಸರ್ಕಾರವು ಕಾಲ ಕಾಲಕ್ಕೆ ಹೊರಡಿಸಿರುವ ಆದೇಶಗಳ ಅನುಸಾರ ವರ್ಗಾವಣೆ ಪ್ರಕ್ರಿಯೆ ಕೈಗೊಳ್ಳಲಾಗುತ್ತಿದೆ.<br>ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ (ವರ್ಗಾವಣೆ) (ವಿಶೇಷ) ನಿಯಮಗಳು 2022ರ ಪ್ರತಿಯನ್ನು ಅನುಬಂಧ-ಬಿ ರಲ್ಲಿ ಸಲ್ಲಿಸಲಾಗಿದೆ. |

**HD/179/PPS/2023**

(ಡಾ॥ ಜಿ.ಪರಮೇಶ್ವರ)
ಗೃಹ ಸಚಿವರು